# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| 1 | ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : 789 |
| 2 | ಸದಸ್ಯರ ಹೆಸರು | : ಶ್ರೀ ಅರವಿಂದ ಕುಮಾರ್ ಅರಳಿ (ವಿಧಾನ ಸಭೆಯಿಂದ ಚುನಾಯಿತರಾದವರು) |
| 3 | ವಿಷಯ | : ಬೀದರ ಜಿಲ್ಲೆಯಲ್ಲಿ ರೇಷ್ಮೆ ಇಲಾಖೆಯಲ್ಲಿನ ಖಾಲಿ ಇರುವ ಹುದ್ದೆಗಳ ಬಗ್ಗೆ. |
| 4 | ಉತ್ತರಿಸುವ ದಿನಾಂಕ | : 21-02-2024 |
| 5 | ಉತ್ತರಿಸುವವರು | : ಮಾನ್ಯ ಪಶುಸಂಗೋಪನೆ & ರೇಷ್ಮೆ ಸಚಿವರು. |

<table>
<tr><th></th><th>ಪ್ರಶ್ನೆಗಳು</th><th>ಉತ್ತರಗಳು</th></tr>
<tr><td>ಅ.</td><td>ಬೀದರ್ ಜಿಲ್ಲೆಯ ರೇಷ್ಮೆ ಇಲಾಖೆಯಲ್ಲಿ ಎಷ್ಟು ಹುದ್ದೆಗಳು ಮಂಜೂರಾತಿ ಯಾಗಿವೆ; ಅದರಲ್ಲಿ ಎಷ್ಟು ಹುದ್ದೆಗಳನ್ನು ಭರ್ತಿ ಮಾಡಲಾಗಿದೆ; ಎಷ್ಟು ಹುದ್ದೆಗಳು ಖಾಲಿ ಇವೆ; (ವಿವರ ನೀಡುವುದು);</td><td>ಬೀದರ್ ಜಿಲ್ಲೆಯ ರೇಷ್ಮೆ ಇಲಾಖೆಯಲ್ಲಿ 82 ಹುದ್ದೆಗಳು ಮಂಜೂರಾಗಿದ್ದು, 14 ಹುದ್ದೆಗಳು ಭರ್ತಿಯಾಗಿರುತ್ತವೆ ಮತ್ತು 68 ಹುದ್ದೆಗಳು ಖಾಲಿ ಇರುತ್ತವೆ. ವಿವರ ಕೆಳಕಂಡಂತಿದೆ.
<table>
<tr><th>ಗ್ರೂಪ್</th><th>ಮಂಜೂರು</th><th>ಭರ್ತಿ</th><th>ಖಾಲಿ</th></tr>
<tr><td>ಎ</td><td>1</td><td>0</td><td>1</td></tr>
<tr><td>ಬಿ</td><td>6</td><td>0</td><td>6</td></tr>
<tr><td>ಸಿ</td><td>66</td><td>13</td><td>53</td></tr>
<tr><td>ಡಿ</td><td>9</td><td>1</td><td>8</td></tr>
<tr><td>ಒಟ್ಟು</td><td>82</td><td>14</td><td>68</td></tr>
</table></td></tr>
<tr><td>ಆ.</td><td>ಈ ಜಿಲ್ಲೆಯಲ್ಲಿ ರೇಷ್ಮೆ ಇಲಾಖೆ ಕಾರ್ಯರೂಪದಲ್ಲಿದೆಯೇ; ಹಾಗಿದ್ದಲ್ಲಿ ಕಳೆದ 5 ವರ್ಷಗಳಲ್ಲಿ ಎಷ್ಟು ಎಕರೆ ರೇಷ್ಮೆ ಬೆಳೆ ಹೆಚ್ಚಳವಾಗಿದೆ;(ವಿವರ ನೀಡುವುದು)</td><td>ಕಳೆದ 05 ವರ್ಷಗಳಲ್ಲಿ ಬೀದರ್ ಜಿಲ್ಲೆಯಲ್ಲಿ ರೇಷ್ಮೆ ಬೆಳೆ ಪ್ರಗತಿಯ ವಿವರ ಕೆಳಕಂಡಂತಿದೆ.
(ವಿಸ್ತೀರ್ಣ - ಎಕರೆಗಳಲ್ಲಿ)
<table>
<tr><th>2019-20</th><th>2020-21</th><th>2021-22</th><th>2022-23</th><th>2023-24</th></tr>
<tr><td>986.75</td><td>958.25</td><td>970.65</td><td>1104.15</td><td>1219.40</td></tr>
</table></td></tr>
<tr><td>ಇ.</td><td>ಬೀದರ್ ಜಿಲ್ಲೆಯಲ್ಲಿ ರೇಷ್ಮೆ ಅಭಿವೃದ್ಧಿಗಾಗಿ ಯಾವ ಯೋಜನೆ ಹಮ್ಮಿಕೊಳ್ಳಲಾಗಿದೆ?</td><td>ರೇಷ್ಮೆ ಇಲಾಖೆಯು ರೇಷ್ಮೆ ಕೃಷಿ ಮಾಡುತ್ತಿರುವ ರೈತರಿಗೆ ಈ ಕೆಳಕಂಡ ಕಾರ್ಯಕ್ರಮಗಳನ್ನು ರೂಪಿಸಿ ಸಹಾಯಧನ ಹಾಗೂ ಪ್ರೋತ್ಸಾಹಧನ ಸೌಲಭ್ಯಗಳನ್ನು ಒದಗಿಸಲಾಗುತ್ತಿದೆ.<br>1. ಸುಧಾರಿತ ಹಿಪ್ಪುನೇರಳೆ ತೋಟ ಸ್ಥಾಪಿಸಲು, ನರ್ಸರಿ ಬೆಳೆಸಲು ಸಹಾಯಧನ ಹಾಗೂ ತಾಂತ್ರಿಕ ಮಾಹಿತಿ ಒದಗಿಸಲಾಗುತ್ತಿದೆ.</td></tr>
</table>

| | | |
|---|---|---|
| | | 2. ಹಿಪ್ಪುನೇರಳೆ ತೋಟಕ್ಕೆ ಟ್ರಂಚಿಂಗ್ - ಮಲ್ಚಿಂಗ್ ಮಾಡಲು ಸಹಾಯಧನ ಹಾಗೂ ತಾಂತ್ರಿಕ ಮಾಹಿತಿ.<br>3. ಹಿಪ್ಪುನೇರಳೆ ತೋಟಕ್ಕೆ ಹನಿ ನೀರಾವರಿ ಅಳವಡಿಕೆಗೆ ಶೇ.90ರಷ್ಟು ಸಹಾಯಧನ.<br>4. ಹಿಪ್ಪುನೇರಳೆ ತೋಟದ ಮಣ್ಣಿನ ಫಲವತ್ತತೆಗಾಗಿ ಜೈವಿಕಗೊಬ್ಬರ ಬಳಕೆ, ಹಿಪ್ಪುನೇರಳೆ ಸೊಪ್ಪಿನ ಇಳುವರಿ ಹಾಗೂ ಗುಣಮಟ್ಟ ಹೆಚ್ಚಿಸುವ ಸಲುವಾಗಿ ಸಸ್ಯ ಸಂವರ್ಧಕ ಹಾಗೂ ಬೇರು ಕೊಳೆ ನಿಯಂತ್ರಣಕ್ಕಾಗಿ ಸಹಾಯಧನ.<br>5. ಹಿಪ್ಪುನೇರಳೆ ಮರ ಕೃಷಿ ಪದ್ಧತಿ ಉತ್ತೇಜನಕ್ಕಾಗಿ ಸಹಾಯಧನ.<br>6. ರೇಷ್ಮೆ ಹುಳು ಸಾಕಾಣಿಕೆ ಮನೆ/ಮೌಂಟಿಂಗ್ ಹಾಲ್ ನಿರ್ಮಾಣಕ್ಕೆ ಸಹಾಯಧನ.<br>7. ಸೋಂಕು ನಿವಾರಕಗಳ ಪೂರೈಕೆ ಮತ್ತು ಸಲಕರಣೆಗಳಿಗೆ ಸಹಾಯಧನ ಹಾಗೂ ತಾಂತ್ರಿಕ ಮಾಹಿತಿ.<br>8. ರೋಟರಿ ಚಂದ್ರಿಕೆಗಳ ಖರೀದಿಗೆ ಸಹಾಯಧನ<br>9. ದ್ವಿತಳಿ ಚಾಕಿ ವೆಚ್ಚಕ್ಕೆ ಸಹಾಯಧನ.<br>10. ಚಾಕಿ ಸಾಕಾಣಿಕಾ ಕೇಂದ್ರದ ಸ್ಥಾಪನೆಗೆ/ ಸಲಕರಣೆಗಳಿಗೆ ಸಹಾಯಧನ.<br>11. ನೂತನ ತಾಂತ್ರಿಕತೆಗಳ ಅಳವಡಿಕೆಗೆ ರೈತರಿಗೆ ತರಬೇತಿ ಮತ್ತು ಕಾರ್ಯಾಗಾರ.<br>12. ರೇಷ್ಮೆ ಗೂಡಿನ ಧಾರಣೆ ಕುಸಿತ ಸಂದರ್ಭದಲ್ಲಿ ರೇಷ್ಮೆ ಬೆಳೆಗಾರರಿಗೆ ರಕ್ಷಣಾತ್ಮಕ ದರ ನೀಡಲಾಗುತ್ತಿದೆ.<br>13.ಉತ್ತರ ಕರ್ನಾಟಕ ಜಿಲ್ಲೆಗಳಲ್ಲಿ ಬೀದರ್ ಸೇರಿದಂತೆ ರೇಷ್ಮೆ ಬೆಳೆಗಾರರು ಉತ್ಪಾದಿಸುವ ದ್ವಿತಳಿ ರೇಷ್ಮೆ ಗೂಡಿಗೆ ಕೆ.ಜಿ.ಗೆ ರೂ.10/-ರಂತೆ ಸಾಗಾಣಿಕೆ ವೆಚ್ಚ.<br><br>ಮಹಾತ್ಮ ಗಾಂಧಿ ರಾಷ್ಟ್ರೀಯ ಉದ್ಯೋಗ ಖಾತ್ರಿ ಯೋಜನೆಯಡಿ ಹಿಪ್ಪುನೇರಳೆ ನರ್ಸರಿ, ತೋಟ ಸ್ಥಾಪನೆ ಮತ್ತು ಹಿಪ್ಪುನೇರಳೆ ಮರ ಕೃಷಿ ಪದ್ಧತಿ ಚಟುವಟಿಕೆಗಳನ್ನು ಹಮ್ಮಿಕೊಳ್ಳಲಾಗಿದ್ದು, ರೈತರಿಗೆ ಕೂಲಿ/ಸಾಮಗ್ರಿ ವೆಚ್ಚವನ್ನು ಭರಿಸುವ ಮೂಲಕ ಗ್ರಾಮೀಣಾ ಪ್ರದೇಶದಲ್ಲಿ ಉದ್ಯೋಗವಕಾಶವನ್ನು ಕಲ್ಪಿಸಿ ಆರ್ಥಿಕ ಸದೃಢತೆಯನ್ನು ಒದಗಿಸಲಾಗುತ್ತಿದೆ. |

ಸಂಖ್ಯೆ: ರೇಷ್ಮೆ 73 ರೇಕೃವಿ 2024

(ಕೆ.ವೆಂಕಟೇಶ್)
ಪಶುಸಂಗೋಪನೆ ಮತ್ತು ರೇಷ್ಮೆ ಸಚಿವರು